**All India Radio: Bangalore**
**Regional Bulletin In Kannada**
**01.10.2025 / 6.40 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**01.10.2025 / 6.40 p.m**
**<><><><>**

ಮುಖ್ಯಾಂಶಗಳು :

1. ಜಂಬೂ ಸವಾರಿಗೆ ಸಾಂಸ್ಕೃತಿಕ ನಗರಿ ಸಜ್ಜು; ಮೈಸೂರಿಗೆ ಹರಿದು ಬಂದ ಜನಸಾಗರ
2. ದಸರಾ ಪ್ರಾಧಿಕಾರದ ರಚನೆಯ ಅಗತ್ಯವಿಲ್ಲ - ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟನೆ
3. ಬೆಂಗಳೂರಿನಲ್ಲಿ ಟ್ರಾಫಿಕ್ ಶುಲ್ಕದ ಬಗ್ಗೆ ಯಾವುದೇ ಪ್ರಸ್ತಾವನೆ ಇಲ್ಲ - ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್
4. ಇಂದು ಅಂತಾರಾಷ್ಟ್ರೀಯ ಕಾಫಿ ದಿನ ; ರಾಜ್ಯದ ಹಲವೆಡೆ ವಿಶಿಷ್ಟ ಜಾಗೃತಿ ಅಭಿಯಾನ

<><><><>

ನಾಡಹಬ್ಬ ದಸರಾ ಮಹೋತ್ಸವದ ಪ್ರಮುಖ ಆಕರ್ಷಣೆಯಾದ ಜಂಬೂ ಸವಾರಿ ವಿಜಯ ದಶಮಿಯಾದ ನಾಳೆ ನೆರವೇರಲಿದೆ. ಜಂಬೂ ಸವಾರಿ ಕಣ್ತುಂಬಿಕೊಳ್ಳಲು ಲಕ್ಷಾಂತರ ಮಂದಿ ಕಾತುರರಾಗಿದ್ದು ಮೈಸೂರು ಜಿಲ್ಲಾಡಳಿತ ಸಕಲ ಸಿದ್ಧತೆ ಕೈಗೊಂಡಿದೆ. ನಾಳೆ ಮಧ್ಯಾಹ್ನ ೧ ರಿಂದ ೧.೧೮ ರವರೆಗೆ ಸಲ್ಲುವ ಧನುರ್ ಲಗ್ನದಲ್ಲಿ ಅರಮನೆ ಬಲರಾಮ ದ್ವಾರದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ನಂದೀ ಧ್ವಜಕ್ಕೆ ಪೂಜೆ ನೆರವೇರಿಸಿ ಮೆರವಣಿಗೆಗೆ ಚಾಲನೆ ನೀಡಲಿದ್ದಾರೆ. ಸಂಜೆ ೪.೪೨ರಿಂದ ೫ ಗಂಟೆ ೬ ನಿಮಿಷಕ್ಕೆ ಸಲ್ಲುವ ಶುಭ ಕುಂಭ ಲಗ್ನದಲ್ಲಿ ಜಂಬೂಸವಾರಿಗೆ ಚಿನ್ನದ ಅಂಬಾರಿಯಲ್ಲಿ ವಿರಾಜಮಾನಗೊಂಡ ಚಾಮುಂಡೇಶ್ವರಿ ದೇವಿಗೆ ಪುಷ್ಪಾರ್ಚನೆ ಮೂಲಕ ಚಾಲನೆ ನೀಡಲಿದ್ದಾರೆ. ಆರನೇ ಬಾರಿಗೆ ಕ್ಯಾಪ್ಟನ್ ಅಭಿಮನ್ಯು ಅಂಬಾರಿ ಹೊತ್ತು ಬನ್ನಿ ಮಂಟಪದ ವರೆಗೆ ಸಾಗಲಿದೆ. ಕಾವೇರಿ ಮತ್ತು ರೂಪಾ ಕುಮ್ಕಿ ಆನೆಗಳಾಗಿ ಸಾಥ್ ನೀಡಲಿವೆ. ನಿಶಾನೆ ಆನೆಯಾಗಿ ಧನಂಜಯ ಹಾಗೂ ನೌಪತ್ ಆನೆಯಾಗಿ ಗೋಪಿ ಮುನ್ನಡೆಯಲಿದೆ. ಈ ಬಾರಿ ಮೆರವಣಿಗೆಯಲ್ಲಿ ೫೮ ಸ್ತಬ್ಧ ಚಿತ್ರಗಳು ೧೨೫ಕ್ಕೂ ಹೆಚ್ಚು ಕಲಾತಂಡಗಳು ೧೪ ಆನೆಗಳು ಅಶ್ವಾರೋಹಿ ಪಡೆಗಳು ಭಾಗವಹಿಸಲಿವೆ. ಭದ್ರತೆಯ ದೃಷ್ಟಿಯಿಂದ ಈ ಬಾರಿ ಡ್ರೋನ್ ಕಣ್ಗಾವಲು ಇರಲಿದೆ. ಈಗಾಗಲೇ ಇರುವ ೩೦ ಸಾವಿರದ ೬೧೪ ಸಿಸಿಟಿವಿ ಕ್ಯಾಮೆರಗಳ ಜೊತೆಗೆ ಹೆಚ್ಚುವರಿಯಾಗಿ ೨೦೦ ಸಿಸಿಟಿವಿ ಕ್ಯಾಮೆರಗಳನ್ನು ಅಳವಡಿಸಲಾಗಿದೆ. ಜಂಬೂಸವಾರಿ ಮುಗಿದ ಬಳಿಕ ರಾತ್ರಿ ೭ ಗಂಟೆಗೆ ಬನ್ನಿ ಮಂಟಪ ಮೈದಾನದಲ್ಲಿ ಪಂಜಿನ ಕವಾಯತು ನಡೆಯಲಿದೆ. ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಕವಾಯತು ವೀಕ್ಷಿಸಿ ಗೌರವ ವಂದನೆ ಸ್ವೀಕರಿಸಲಿದ್ದಾರೆ. ಇಂದು ಮೈಸೂರು ಅರಮನೆಯಲ್ಲಿ ನಡೆದ ಆಯುಧ ಪೂಜೆ ಕುರಿತಂತೆ ನಮ್ಮ ಮೈಸೂರು ಪ್ರತಿನಿಧಿ ಪ್ರಶಾಂತ್ ಹೆಚ್ಚಿನ ಮಾಹಿತಿ ನೀಡಿದ್ದಾರೆ.

**ಧ್ವನಿ : ಪ್ರಶಾಂತ್, ಪ್ರತಿನಿಧಿ ( ೩೪ ಸೆಕೆಂಡುಗಳು)**

<><><><>

ಮುಖ್ಯಮಂತ್ರಿಯಾಗಿ ೫ವರ್ಷ ಪೂರ್ಣಗೊಳಿಸುವುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟಪಡಿಸಿದ್ದಾರೆ. ಮೈಸೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮುಂದಿನ ಬಾರಿ ನಾನೇ ಚಾಮುಂಡಿಗೆ ಪುಷ್ಪಾರ್ಚನೆ ಯಾಕೆ ಮಾಡಬಾರದು ಎಂದು ಪ್ರಶ್ನಿಸಿದ್ದಾರೆ. ಬಿಜೆಪಿ ನಾಯಕರು ಮುಂದಿನ ದಸರಾದಲ್ಲಿ

ಸಿದ್ದರಾಮಯ್ಯ ಅವರು ಪುಷ್ಪಾರ್ಚನೆ ಮಾಡುವುದಿಲ್ಲ ಎಂಬ ಹೇಳಿಕೆಗೆ ಪ್ರತಿಕ್ರಿಯಿಸಿ ಬಿಜೆಪಿಯವರಿಗೆ ವಸ್ತುಸ್ಥಿತಿ ತಿಳಿದಿಲ್ಲ ಎಂದು ಹೇಳಿದ್ದಾರೆ. ಇದೇ ವೇಳೆ ದಸರಾ ಪ್ರಾಧಿಕಾರ ರಚನೆಯ ಅಗತ್ಯವಿಲ್ಲ ಎಂದು ತಿಳಿಸಿದ್ದಾರೆ. ದಸರಾ ಲೈಟಿಂಗ್ಸ್, ಏರ್ ಶೋ, ಡ್ರೋನ್ ಶೋ, ಎಲ್ಲವೂ ತುಂಬಾ ಅಚ್ಚುಕಟ್ಟಾಗಿ ನಡೆಯುತ್ತಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

<><><>

ಕರಾವಳಿಯಾದ್ಯಂತ ನವರಾತ್ರಿಯ ಸಂಭ್ರಮ ಮನೆ ಮಾಡಿದೆ. ಪ್ರತಿಯೊಂದು ದೇವಿ ದೇವಸ್ಥಾನಗಳು ನವರಾತ್ರಿ ಹಿನ್ನೆಲೆಯಲ್ಲಿ ಮೆರುಗು ಪಡೆದುಕೊಂಡಿವೆ. ಮಂಗಳೂರು ನಗರವಂತೂ ಮದುವಣಗಿತ್ತಿಯಂತೆ ಶೃಂಗಾರಗೊಂಡಿದೆ. ವಿವಿಧ ದೇವಾಲಯಗಳನ್ನು ವಿದ್ಯುತ್ ದೀಪಗಳಿಂದ ಹಾಗೂ ಹೂವು, ತಳಿರು ತೋರಣಗಳಿಂದ ಅಲಂಕರಿಸಲಾಗಿದೆ. ಇತಿಹಾಸ ಪ್ರಸಿದ್ಧ ಮಂಗಳಾದೇವಿ ದೇವಸ್ಥಾನದಲ್ಲೂ ನವರಾತ್ರಿ ಉತ್ಸವ ವಿವಿಧ ಧಾರ್ಮಿಕ ಕಾರ್ಯಕ್ರಮಗಳೊಂದಿಗೆ ಆರಂಭವಾಗಿದೆ. ಜಿಲ್ಲೆಯ ಪುರಾಣ ಪ್ರಸಿದ್ಧ ಕ್ಷೇತ್ರಗಳಾದ ಕಟೀಲು ದುರ್ಗಾಪರಮೇಶ್ವರೀ ದೇವಸ್ಥಾನ, ಪೊಳಲಿ ರಾಜರಾಜೇಶ್ವರೀ ದೇವಸ್ಥಾನ, ಬಪ್ಪನಾಡು ದುರ್ಗಾಪರಮೇಶ್ವರೀ ದೇವಸ್ಥಾನ ಸೇರಿದಂತೆ ವಿವಿಧ ದೇವಿ ದೇವಸ್ಥಾನಗಳಲ್ಲಿ ವಿಶೇಷ ಪೂಜೆ ನಡೆಯುತ್ತಿದೆ. ಮಂಗಳೂರು ದಸರಾ ಎಂದೇ ಖ್ಯಾತಿ ಪಡೆದ ಕುದ್ರೋಳಿ ಗೋಕರ್ಣನಾಥ ಕ್ಷೇತ್ರದ ನವರಾತ್ರಿ ಉತ್ಸವ ಕೂಡ ವಿಜೃಂಭಣೆಯಿಂದ ನಡೆಯುತ್ತಿದ್ದು, ಪ್ರತಿದಿನ ಸಾವಿರಾರು ಮಂದಿ ಕ್ಷೇತ್ರಕ್ಕೆ ಭೇಟಿ ನೀಡುತ್ತಿದ್ದಾರೆ. ಶಾರದೆ ಸೇರಿದಂತೆ ನವದುರ್ಗೆಯರನ್ನು ಇಲ್ಲಿ ಪ್ರತಿಷ್ಠಾಪಿಸಲಾಗಿದ್ದು ಕ್ಷೇತ್ರ ಜನಾಕರ್ಷಣೆಯ ಕೇಂದ್ರವಾಗಿ ಮಾರ್ಪಟ್ಟಿದೆ. ನಾಳೆ ಸಂಜೆ ೪ ಗಂಟೆಯಿಂದ ಮಂಗಳೂರು ದಸರಾದ ವೈಭವದ ಶೋಭಾಯಾತ್ರೆ ನಡೆಯಲಿದ್ದು, ರಾಜ್ಯದ ವಿವಿಧ ಜಿಲ್ಲೆಗಳಿಂದ ಕಲಾತಂಡಗಳು ಪಾಲ್ಗೊಳ್ಳಲಿವೆ. ೭೦ಕ್ಕೂ ಅಧಿಕ ಟ್ಯಾಬ್ಲೋಗಳು, ಮೆರವಣಿಗೆಯಲ್ಲಿ ಸಾಗಿ ಬರಲಿವೆ ಎಂದು ಕುದ್ರೋಳಿಯ ಕೋಶಾಧಿಕಾರಿ ಪದ್ಮರಾಜ್ ಆರ್ ತಿಳಿಸಿದ್ದಾರೆ.

<><><>

ಕೊಡಗು ಜಿಲ್ಲೆಯ ಮಡಿಕೇರಿ ಮತ್ತು ಗೋಣಿಕೊಪ್ಪದಲ್ಲಿ ವೈಭವದ ದಸರಾ ಆಚರಣೆ ಹಿನ್ನೆಲೆಯಲ್ಲಿ ಜನರ ಸುರಕ್ಷತೆಯನ್ನು ಗಮನದಲ್ಲಿಟ್ಟು ಅಗತ್ಯ ಪೊಲೀಸ್ ಬಂದೋಬಸ್ತ್ ವ್ಯವಸ್ಥೆ ಮಾಡಲಾಗಿದೆ. ಈ ಬಾರಿ ಹೆಚ್ಚಿನ ಪೊಲೀಸ್ ಸಿಬ್ಬಂದಿ ಮತ್ತು ಭದ್ರತಾ ವ್ಯವಸ್ಥೆ ಒದಗಿಸಲಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ರಾಮರಾಜನ್ ಮಾಹಿತಿ ನೀಡಿದ್ದಾರೆ. ಮಹಿಳೆಯರ ಸುರಕ್ಷತೆ, ಜನ ಸಂದಣಿ ಏರ್ಪಡುವ ಸ್ಥಳಗಳಲ್ಲಿ ಸೂಕ್ತ ನಿಯಂತ್ರಣಕ್ಕೆ ಜಂಬೋ ತಂಡಗಳನ್ನು ರಚಿಸಲಾಗಿದೆ. ಮಡಿಕೇರಿಯಲ್ಲಿ ೧೦ ಮತ್ತು ಗೋಣಿಕೊಪ್ಪ ದಸರಾದಲ್ಲಿ ೪ ಜಂಬೋ ತಂಡಗಳು ಕಾರ್ಯಾಚರಣೆ ನಡೆಸಲಿವೆ. ಈ ಕುರಿತಂತೆ ಕೊಡಗು ಪ್ರತಿನಿಧಿ ಅನಿಲ್ ಹೆಚ್.ಟಿ ಹೆಚ್ಚಿನ ಮಾಹಿತಿ ನೀಡಿದ್ದಾರೆ.

**ಧ್ವನಿ: ಅನಿಲ್ ಹೆಚ್.ಟಿ., ಪ್ರತಿನಿಧಿ, ( ೭೦ ಸೆಕೆಂಡುಗಳು)**

<><><>

"ಸಾರ್ವಜನಿಕರೇ ರಸ್ತೆಗುಂಡಿಗಳನ್ನು ಗಮನಿಸಿ ಸರ್ಕಾರಕ್ಕೆ ತಿಳಿಸುವ ವ್ಯವಸ್ಥೆ ಇರುವುದು ಕರ್ನಾಟಕದಲ್ಲಿ ಮಾತ್ರ" ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಸ್ತೆಗುಂಡಿಗಳ ದುರಸ್ತಿ ಕಾರ್ಯ ನಿರಂತರ ಪ್ರಕ್ರಿಯೆ ಎಂದು ಹೇಳಿದ್ದಾರೆ. ಗುಣಮಟ್ಟ

ಪರಿಶೀಲನೆ ನಡೆಸುವ ಸಲುವಾಗಿ ನಗರ ಪ್ರದಕ್ಷಿಣೆ ಮಾಡಲಾಗುತ್ತಿದ್ದು, ಸಾರ್ವಜನಿಕರ ಜೊತೆ ಚರ್ಚೆಯನ್ನು ನಡೆಸಲಾಗುವುದು ಎಂದು ತಿಳಿಸಿದ್ದಾರೆ. ಟ್ರಾಫಿಕ್ ಶುಲ್ಕದ ಬಗ್ಗೆ ಪ್ರತಿಕ್ರಿಯಿಸಿದ ಅವರು, "ಇದರ ಬಗ್ಗೆ ಒಂದಷ್ಟು ಜನರು ಸಲಹೆ ನೀಡಿದ್ದಾರೆ ಹೊರತು ಸರ್ಕಾರದ ಮುಂದೆ ಈ ರೀತಿಯ ಯಾವುದೇ ಪ್ರಸ್ತಾವನೆಯಿಲ್ಲ" ಎಂದು ಸ್ಪಷ್ಟಪಡಿಸಿದ್ದಾರೆ.

<><><><>

ಅಂತಾರಾಷ್ಟ್ರೀಯ ಕಾಫಿ ದಿನದ ಅಂಗವಾಗಿ ಭಾರತೀಯ ಕಾಫಿ ಮಂಡಳಿ ಮತ್ತು ಸ್ಪೆಷಾಲಿಟಿ ಕಾಫಿ ಅಸೋಸಿಯೇಷನ್ ಸಹಯೋಗದಲ್ಲಿ ವಾಕ್ ವಿತ್ ಕಾಫಿ ಎಂಬ ವಿಶಿಷ್ಟ ಜಾಗೃತಿ ಅಭಿಯಾನ ನಡೆಯಿತು. ಕಾಫಿ ಮಂಡಳಿಯ ಅಧ್ಯಕ್ಷ ಎಂ.ಜೆ. ದಿನೇಶ್ ನೇತೃತ್ವದಲ್ಲ ಬೆಂಗಳೂರು ನಗರದ ಎಂ.ಜಿ.ರಸ್ತೆಯಿಂದ ಕಾಫಿ ಮಂಡಳಿ ಕಚೇರಿಯವರೆಗೂ ನಡೆದ ವಾಕಥಾನ್ ನಲ್ಲಿ ಸುಮಾರು ೪೦೦ಕ್ಕೂ ಹೆಚ್ಚು ಮಂದಿ ಪಾಲ್ಗೊಂಡಿದ್ದರು. ಇದೇ ವೇಳೆ ಮಹಿಳೆಯರನ್ನು ಸಬಲೀಕರಣಗೊಳಿಸುವ ಸಲುವಾಗಿ ರಾಜ್ಯ ಸರ್ಕಾರದ ಸಹಯೋಗದೊಂದಿಗೆ ಪ್ರಾರಂಭಿಸಿರುವ ಇಂಡಿಯನ್ ಕಾಫಿ ಹೌಸ್ ಕಿಯೋಸ್ಕ್ ಲೋಕಾರ್ಪಣೆ ಮಾಡಲಾಯಿತು. ಕಾಫಿ ಮಂಡಳಿ ಅಧ್ಯಕ್ಷ ಎಂ.ಜೆ.ದಿನೇಶ್, ಮಾತನಾಡಿ ಗ್ರಾಮೀಣ ಭಾಗದ ಮಹಿಳೆಯರನ್ನು ಸಬಲೀಕರಣರನ್ನಾಗಿಸುವ ಸಲುವಾಗಿ ಕಾಫಿ ಮಂಡಳಿಯಿಂದ ೫೦೦ ಮಹಿಳೆಯರಿಗೆ ತರಬೇತಿ ನೀಡಲಾಗಿದೆ ಎಂದು ಹೇಳಿದರು.

<><><><>

ಅಂತಾರಾಷ್ಟ್ರೀಯ ಕಾಫಿ ದಿನಾಚರಣೆ ಹಿನ್ನಲೆಯಲ್ಲಿ ಮಡಿಕೇರಿ ಸೇರಿದಂತೆ ಕೊಡಗು ಜಿಲ್ಲೆಯಾದ್ಯಂತ ಕಾಫಿಯ ಮಹತ್ವ ಸಾರುವ ಕಾರ್ಯಕ್ರಮಗಳನ್ನು ಆಯೋಜಿಸಲಾಗಿತ್ತು. ಕೊಡಗು ಮಹಿಳಾ ಕಾಫಿ ಜಾಗ್ರತಿ ಸಂಘದ ವತಿಯಿಂದ ಮಡಿಕೇರಿಯಲ್ಲಿರುವ ಕೊಡಗು ವೈದ್ಯಕೀಯ ವಿಜ್ಞಾನ ಸಂಸ್ಥೆಯಲ್ಲಿ ವಿದ್ಯಾರ್ಥಿಗಳಿಗೆ ಕಾಫಿಯನ್ನು ವಿತರಿಸಲಾಯಿತು. ಕಾಫಿಯಿಂದ ಆರೋಗ್ಯಕ್ಕೆ ಪೂರಕವಾಗುವ ಅಂಶಗಳ ಬಗ್ಗೆ ಕಾಫಿ ಬೆಳೆಗಾರರು ಮಾಹಿತಿ ನೀಡಿದರು. ಚಿಕ್ಕಮಗಳೂರು ನಗರದ ಅಜಾದ್ ಪಾರ್ಕ್ ವೃತದಲ್ಲಿ ಇಂದು ಅಂತಾರಾಷ್ಟ್ರೀಯ ಕಾಫಿ ದಿನಾಚರಣೆಯನ್ನು ಆಚರಿಸಲಾಯಿತು. ವಿಧಾನ ಪರಿಷತ್ ಸದಸ್ಯ ಸಿ. ಟಿ ರವಿ ಮಾತನಾಡಿ, ಕಾಫಿ ಬೆಳೆಗಾರರು ಅನೇಕ ಸಮಸ್ಯೆಗಳನ್ನು ಎದುರಿಸುತ್ತಿದ್ದು ಸರ್ಕಾರ ಸ್ಪಂದಿಸಿ ನೆರವಾಗಬೇಕು ಎಂದು ತಿಳಿಸಿದರು. ನಗರದಲ್ಲಿ ಸುಮಾರು ೭೦೦ಕ್ಕೂ ಹೆಚ್ಚು ಜನರಿಂದ ವಾಕ್ ವಿತ್ ಕಾಫಿ ಎಂಬ ಜಾಥಾ ನಡೆಯಿತು.

<><><><>

ರೈಲ್ವೆ ನಿಲ್ದಾಣಗಳಲ್ಲಿ ಸ್ವಚ್ಛತೆ ಹಾಗೂ ನೈರ್ಮಲ್ಯಕ್ಕೆ ಮೊದಲ ಆದ್ಯತೆ ನೀಡಲಾಗಿದೆ ಎಂದು ನೈಋತ್ಯ ರೈಲ್ವೆಯ ಮುಖ್ಯ ಸಾರ್ವಜನಿಕ ಸಂಪರ್ಕ ಅಧಿಕಾರಿ ಮಂಜುನಾಥ ಕಾನಮಡಿ ತಿಳಿಸಿದ್ದಾರೆ. ಹುಬ್ಬಳ್ಳಿಯಲ್ಲಿ ಸ್ವಚ್ಛತಾ ಹೀ ಸೇವಾ ಅಂಗವಾಗಿ ಸ್ವಚ್ಛೋತ್ಸವ ಕುರಿತು ಆಕಾಶವಾಣಿಯೊಂದಿಗೆ ಮಾತನಾಡಿದ ಅವರು, ಸುಮಾರು ಹತ್ತು ವರ್ಷ ಈಚೆ, ರೈಲು ಹಳಿಗಳು ನೈರ್ಮಲ್ಯಕ್ಕೆ ಆದ್ಯತೆ ಇರಲಿಲ್ಲ. ಆದರೆ ಈಗ ಬಹಳಷ್ಟು ಸುಧಾರಣೆಯಾಗಿದೆ. ಹೊಸ ಹೊಸ ತಂತ್ರಜ್ಞಾನಗಳನ್ನು ಬಳಸಿ ರೈಲಿನ ಭೋಗಿಗಳನ್ನು ಸ್ವಚ್ಛಗೊಳಿಸಲಾಗುತ್ತದೆ ಎಂದು ಹೇಳಿದ್ದಾರೆ.

**ಧ್ವನಿ : ಮುಖ್ಯ ಸಾರ್ವಜನಿಕ ಸಂಪರ್ಕ ಅಧಿಕಾರಿ ಮಂಜುನಾಥ್ ಕಾನಮಡಿ, (೩೨ ಸೆಕೆಂಡುಗಳು)**

ಉತ್ತರಕನ್ನಡ ಜಿಲ್ಲೆಯ ಕಾರವಾರದ ಸುಂಕೇರಿ ಮೂರು ದೇವಸ್ಥಾನದ ಆವರಣದಲ್ಲಿ "ಸ್ವಚ್ಛತೆಯೆಡೆಗೆ ಒಂದು ಹೆಜ್ಜೆ" ಸೇವಾ ಪಾಕ್ಷಿಕ ಸ್ವಚ್ಛತಾ ಅಭಿಯಾನಕ್ಕೆ ಮಾಜಿ ಶಾಸಕಿ ರೂಪಾಲಿ ನಾಯ್ಕ ಸ್ವಚ್ಛತೆ ಮಾಡುವ ಮೂಲಕ ಚಾಲನೆ ನೀಡಿದರು.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>